**ದಿನಾಂಕಃ 05.01.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 2 ನೇ ಎದುರುದಾರರ ಪರ ವಕೀಲರಿಂದಃ**

ನಾನು Golden eye Guardian Solution ನಲ್ಲಿ ಸೆಕ್ಯೂರಿಟಿ ಗಾರ್ಡ್ ಆಗಿ 10 ವರ್ಷಗಳಿಂದ ಕೆಲಸ ಮಾಡುತ್ತಿದ್ದೆನು. ಹಾಜರಾತಿ ಪುಸ್ತಕವನ್ನು ಹಾಜರುಪಡಿಸಲು ತೊಂದರೆಯೇ ಎಂದರೆ ಹಾಜರುಪಡಿಸುತ್ತೇನೆ ಎಂದು ನುಡಿಯುತ್ತಾರೆ. ಬ್ಯಾಂಕ್ ಮುಖಾಂತರ ವೇತನವನ್ನು ನೀಡುತ್ತಿದ್ದರು. ನಿ.ಪಿ.18 ರ ಪ್ರಕಾರ ನಿಮಗೆ ತಿಂಗಳಿಗೆ ರೂ.15,944/- ಗಳು ವೇತನವಿತ್ತು ಎಂದರೆ ಸರಿ. ಈಗಲೂ ಸಹ ನೀವು ಕೆಲಸದಲ್ಲಿ ಮುಂದುವರೆಯುತ್ತಿದ್ದರೂ ಸಹ ಕೆಲಸಕ್ಕೆ ರಾಜಿನಾಮೆ ನೀಡಿದ್ದೇನೆ ಎಂದು ಸುಳ್ಳು ದಾಖಲೆಯನ್ನು ಸೃಷ್ಟಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದೀರಿ ಎಂದರೆ ಸರಿಯಲ್ಲ. ಅಪಘಾತದ ನಂತರ ನನಗೆ ಕೆಲಸ ಮಾಡಲು ಸಾಧ್ಯವಾಗದ ಕಾರಣ ನಾನೇ ರಾಜಿನಾಮೆ ನೀಡಿರುತ್ತೇನೆ. ಈ ಮೊದಲಿನಂತೆ ನೀವು ಕೆಲಸ ಮುಂದುವರೆಸಲು ನಿಮಗೆ ಯಾವುದೇ ತೊಂದರೆ ಇರುವುದಿಲ್ಲ ಎಂದರೆ ಸರಿಯಲ್ಲ. ಕಾರಿನ ಚಾಲಕನ ಯಾವುದೇ ರೀತಿ ತಪ್ಪಿಲ್ಲದಿದ್ದರೂ ಸಹ ಪೊಲೀಸರೊಂದಿಗೆ ಶಾಮೀಲಾಗಿ ಸುಳ್ಳು ದಾಖಲೆಗಳನ್ನು ಸೃಷ್ಟಿ ಮಾಡಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಪ್ರಕರಣಕ್ಕಾಗಿ ದಾಖಲೆಗಳನ್ನು ಸೃಷ್ಟಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**( ಶ್ರೀಮತಿ. ನಿರ್ಮಲ ಎಂ.ಸಿ)**
ಎಸಿಜೆಎಂ ನ್ಯಾಯಾಧೀಶರು
ಲಘು ವ್ಯವಹಾರಗಳ ನ್ಯಾಯಾಲಯ
ಬೆಂಗಳೂರು.